ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 3-6-2017

# ಪತ್ರಿಕಾ ಆಮಂತ್ರಣ

1. ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ :

ಉದ್ಘಾಟನೆ:

ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಮುಖ್ಯ ಅತಿಥಿಗಳು:

ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರು.

ಕೆ.ಜೆ. ಜಾರ್ಜ್, ನಗರಾಭಿವೃದ್ಧಿ ಮತ್ತು ನರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.

ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ.

ಅಧ್ಯಕ್ಷತೆ:

ಆರ್. ವಿ. ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.

ವಿಶೇಷ ಉಪನ್ಯಾಸ:

ಡಾ. ವಿ. ಎಂ. ರಮೇಶ್, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು.

ದಿನಾಂಕ: 04-06-2017 ಭಾನುವಾರ, ಸಮಯ: ಬೆಳಿಗ್ಗೆ 11-00 ಗಂಟೆಗೆ.

ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಬೆಂಗಳೂರು – 560 002.

**2. ವಿಶ್ವ ಪರಿಸರ ದಿನಾಚರಣೆ – ಕರ್ನಾಟಕ ರಾಜ್ಯ ಪ್ರಶಸ್ತಿ ಪ್ರದಾನ – 2017 ಮತ್ತು ವಸ್ತು ಪ್ರದರ್ಶನ**

**ಉದ್ಘಾಟನೆ ಮತ್ತು ಪರಿಸರ ಪ್ರಶಸ್ತಿ ಪ್ರದಾನ**

**ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.**

**ಗೌರವಾನ್ವಿತ ಅತಿಥಿಗಳು:**

**ಡಿ.ವಿ. ಸದಾನಂದ ಗೌಡ, ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವರು.**

**ಅನಂತ್ ಕುಮಾರ್, ರಾಸಾಯನಿಕ ಮತ್ತು ರಸಗೊಬ್ಬರ ಕೇಂದ್ರ ಸಚಿವರು**

**ಬಹುಮಾನ ವಿತರಣೆ:**

**ಬಿ. ರಮಾನಾಥ ರೈ, ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು.**

**ವಸ್ತು ಪ್ರದರ್ಶನ ಉದ್ಘಾಟನೆ:**

**ಕೆ.ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.**

**ಅಧ್ಯಕ್ಷತೆ:**

**ಕೃಷ್ಣ ಬೈರೇಗೌಡ, ಕೃಷಿ ಸಚಿವರು.**

**ದಿನಾಂಕ:** 05–06–2017 ಸೋಮವಾರ, ಸಮಯ: ಬೆಳಿಗ್ಗೆ 9–30 ಗಂಟೆಗೆ.

**ಸ್ಥಳ: ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರಾಷ್ಟ್ರೀಯ ಸಭಾಂಗಣ,**
**ಕೃಷಿ ವಿಶ್ವವಿದ್ಯಾನಿಲಯ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿಕೆವಿಕೆ), ಬೆಂಗಳೂರು.**

**3. ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ವತಿಯಿಂದ ವಿಶ್ವ ಪರಿಸರ ದಿನಾಚರಣೆ:**

ದಿನಾಂಕ: 05–06–2017 ಸೋಮವಾರ, ಸಮಯ: ಬೆಳಿಗ್ಗೆ 11–00 ಗಂಟೆಗೆ.

ಸ್ಥಳ: ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ ಆವರಣ, ಧನ್ವಂತರಿ ರಸ್ತೆ,
ಬೆಂಗಳೂರು–560 009.

4. **<u>ಪತ್ರಿಕಾಗೋಷ್ಠಿ:</u>**

ರವೀಂದ್ರ ಕಲಾಕ್ಷೇತ್ರ–50 ಸುವರ್ಣ ಸಂಭ್ರಮ–ನೆನಪಿನೋಕುಳಿ –11 ರ ಕುರಿತು ಪತ್ರಿಕಾಗೋಷ್ಠಿ:

ಶ್ರೀಮತಿ ಎಂ.ಎಸ್. ಅರ್ಚನಾ, ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
ಹಾಗೂ
ಶ್ರೀನಿವಾಸ ಜಿ. ಕಪ್ಪಣ್ಣ, ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷರು.

ದಿನಾಂಕ: 05–06–2017, ಸೋಮವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ರವೀಂದ್ರ ಕಲಾಕ್ಷೇತ್ರ. ಜೆ.ಸಿ. ರಸ್ತೆ, ಬೆಂಗಳೂರು.

5. <u>National Prizes for Research on Interfaces between Chemistry and Biology (Donated by AVRA Laboratories, Hyderabad</u>):

<u>Prizes will be Presented to</u>

Professor G. Mugesh, Indian Institute of Science,Bengaluru
and

Professfor Sandeep Verma, Indian Institute of Technology, Kanpur.

by

Professor K.N. Ganesh, Director, Indian Institute of Science Education & Research (IISER), Pune.

Date: 05-06-2017 Monday, Time : 2.30 PM.

Place: AMRL Conference Hall, JNCASR, Bengaluru.

## ಪತ್ರಿಕಾ ಪ್ರಕಟಣೆ

## ಎಲ್ಲಾ ವರ್ಗದವರ ಅಭಿವೃದ್ಧಿಗೆ ಶ್ರಮಿಸುತ್ತಿರುವ ಸರ್ಕಾರ

**ಬೆಂಗಳೂರು, ಜೂನ್ 3, (ಕರ್ನಾಟಕ ವಾರ್ತೆ)**

ಎಲ್ಲಾ ವರ್ಗದವರನ್ನು ಮೇಲೆತ್ತಲು ಸರ್ಕಾರ ತನ್ನ ಕಾರ್ಯಕ್ರಮಗಳ ಮೂಲಕ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಅವರು ಇಂದು ಮೈಸೂರಿನಲ್ಲಿ ಏರ್ಪಡಿಸಲಾಗಿದ್ದ

ಮೈಸೂರು ವಿಭಾಗಮಟ್ಟದ ಫಲಾನುಭವಿಗಳಿಗೆ ಸವಲತ್ತು ವಿತರಿಸುವ "ಕೊಟ್ಟ ಮಾತು ದಿಟ್ಟ ಸಾಧನೆ" ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಸವಲತ್ತು ವಿತರಿಸಿ ಮಾತನಾಡಿದರು.

ತಮ್ಮ ಸರ್ಕಾರ ಬಸವ, ಬುದ್ದ, ಅಂಬೇಡ್ಕರ್ ಅವರ ಮಾರ್ಗದಲ್ಲಿ ನಾವು ನಡೆಯುತ್ತಿದ್ದೇವೆ. ಆ ದಿಕ್ಕಿನಲ್ಲಿ ಧೃಡವಾದ ಹೆಜ್ಜೆ ಇಡುತ್ತಿದ್ದೇವೆ. ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬುದು ನಮ್ಮ ಧ್ಯೇಯ. ಪ್ರತಿಯೊಬ್ಬರಿಗೂ ಸಾಮಾಜಿಕ, ಆರ್ಥಿಕ ಸ್ವಾತಂತ್ರ್ಯ ಸಿಕ್ಕಾಗ ಮಾತ್ರ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿರುವುದು ಸಾರ್ಥಕವಾಗುತ್ತದೆ. ಬಡವರ ಕೆಲಸಗಳನ್ನು ಮಾಡಲು ಹೃದಯ ಇದ್ದರೆ ಸಾಕು ಅದನ್ನು ನಾವು ಮಾಡಿ ತೋರಿಸಿದ್ದೇವೆ ಎಂದು ಮುಖ್ಯಮಂತ್ರಿಗಳು ಮಾಡಿದರು.

ಅನ್ನಭಾಗ್ಯ ಯೋಜನೆ ಜಾರಿಗೆ ತಂದ ಬಳಿಕೆ ಬಡವರು ಹೊಟ್ಟೆ ತುಂಬ ಊಟ ಮಾಡುತ್ತಿದ್ದಾರೆ ಎಂದ ಮುಖ್ಯಮಂತ್ರಿಯವರು ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬದವರಿಗೆ ನೀಡುವ ಪರಿಹಾರವನ್ನು 5.00 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ. ಪರಿಶಿಷ್ಟ ಜಾತಿ/ಪಂಗಡದವರ ಕಲ್ಯಾಣಕ್ಕಾಗಿ ಈ ವರ್ಷ 27,703 ಕೋಟಿ ರೂ. ಗಳನ್ನು ವಿನಿಯೋಗ ಮಾಡಲಾಗುವುದು ಎಂದು ಅವರು ತಿಳಿಸಿದರು.

ನಮ್ಮ ಸರ್ಕಾರವು ಕೊಟ್ಟ ಮಾತಿನಂತೆ ನಡೆದುಕೊಂಡಿದೆ. ಪ್ರಣಾಳಿಕೆಯಲ್ಲಿನ 190 ಭರವಸೆಗಳ ಪೈಕಿ 165 ಕ್ಕೂ ಹೆಚ್ಚು ಭರವಸೆಗಳನ್ನು ಈಡೇರಿಸಿದ್ದೇವೆ. ಉಳಿದ ಅವಧಿಯಲ್ಲಿ ಎಲ್ಲಾ ಆಶ್ವಾಸನೆಗಳನ್ನು ಕಾರ್ಯರೂಪಕ್ಕೆ ತರುತ್ತೇವೆಂದು ಮುಖ್ಯಮಂತ್ರಿಗಳು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಲೋಕೋಪಯೋಗಿ ಸಚಿವ ಡಾ: ಹೆಚ್.ಸಿ. ಮಹದೇವಪ್ಪ ಅವರು ಕಳೆದ ನಾಲ್ಕು ವರ್ಷಗಳಲ್ಲಿ ನಾವು ಸಮಗ್ರ ಅಭಿವೃದ್ಧಿಯ ಆಡಳಿತ ನೀಡಿದ್ದೇವೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಚಿವರಾದ ಎಂ. ಕೃಷ್ಣಪ್ಪ, ಯು.ಟಿ. ಖಾದರ್, ಆಂಜನೇಯ, ರಾಜ್ಯ ಸಭಾ ಸದಸ್ಯ ಆಸ್ಕರ್ ಫರ್ನಾಂಡೀಸ್ ಮೊದಲಾದವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಯವರು ಸರ್ಕಾರದ ಯೋಜನೆಗಳ ಕಿರು ಹೊತ್ತಿಗೆಯನ್ನು ಬಿಡುಗಡೆ ಮಾಡಿದರು.

## ಜೂನ್ 5 ರಿಂದ 16 ರವರೆಗೆ ವಿಧಾನ ಪರಿಷತ್ ಕಲಾಪ ನಿಗದಿ – ಡಿ.ಹೆಚ್. ಶಂಕರಮೂರ್ತಿ

ಬೆಂಗಳೂರು, ಜೂನ್ 3, (ಕರ್ನಾಟಕ ವಾರ್ತೆ)

ಕರ್ನಾಟಕ ವಾರ್ತೆ, ಬೆಂಗಳೂರು , ಜೂನ್ 3: ಕರ್ನಾಟಕ ವಿಧಾನ ಪರಿಷತ್ತಿನ ನೂರ ಮೂವತ್ತಮೂರನೇ ಅಧಿವೇಶನದ ಮುಂದುವರೆದ ಅಧಿವೇಶನದ ಕಲಾಪ ನಡೆಸಲು ನಿಗದಿಪಡಿಸಲಾಗಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ತಿಳಿಸಿದರು.

ಸದನ ಪ್ರಾರಂಭದ ಹಿನ್ನೆಲೆಯಲ್ಲಿ ಇಂದು ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಕರೆದಿದ್ದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ ಅವರು ಕಲಾಪದ ಮೊದಲ ದಿನ ಗಣ್ಯ ವ್ಯಕ್ತಿಗಳ ನಿಧನದ ಗೌರವಾರ್ಥ ಶೋಕಾಚರಣೆಯನ್ನು ಸಲ್ಲಿಸಿದ ನಂತರ 10 ನಿಮಿಷಗಳ ಕಾಲ ಸದನವನ್ನು ಮುಂದೂಡಿ ಕಲಾಪನ್ನು ನಡೆಸಲಾಗುತ್ತಿತ್ತು, ಆದರೆ ಇತ್ತೀಚೆಗೆ ನಿಧನರಾದ ಸದನದ ಹಾಲಿ ಹಿರಿಯ ಸದಸ್ಯೆ ವಿಮಲಾಗೌಡ ಅವರೊಂದಿಗೆ ಬಹಳಷ್ಟು ಸದಸ್ಯರು ಭಾವನಾತ್ಮಕ ಸಂಬಂಧವನ್ನು ಹೊಂದಿರುವ ಹಿನ್ನೆಲೆಯಲ್ಲಿ ಸದನದ ಹಿರಿಯ ಸದಸ್ಯರ ಅಭಿಪ್ರಾಯವನ್ನು ಪಡೆದು ಕೊಳ್ಳುವ ಮೂಲಕ ಅಂದು ಅವರಿಗೆ ಶ್ರದ್ಧಾಂಜಲಿಯನ್ನು ಸಲ್ಲಿಸಿ, ಕಲಾಪವನ್ನು ಜೂನ್ 6 ಕ್ಕೆ ಮುಂದೂಡಲಾಗುವುದು ಎಂದರು.

ಹಾಗೆಯೇ ಮೊದಲ ದಿನದಂದೇ ಸರ್ಕಾರದಿಂದ ನಾಮ ನಿರ್ದೇಶಿತರಾಗಿರುವ ಇಬ್ಬರು ಸದಸ್ಯರು ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ತಿಳಿಸಿದ ಅವರು, ಇತ್ತೀಚೆಗೆ ಸಾರ್ವಜನಿಕ ವಲಯ ಮತ್ತು ಮಾಧ್ಯಮಗಳಲ್ಲಿ ಚರ್ಚಿತವಾಗುತ್ತಿರುವ ಜಿ.ಎಸ್.ಟಿ ಕುರಿತು ವಿಧಾನ ಪರಿಷತ್ತಿನ ಸದಸ್ಯರಿಗೆ ಮಾಹಿತಿಯನ್ನು ನೀಡುವ ಸಲುವಾಗಿ ಎರಡನೇ ದಿನವಾದ ಜೂನ್ 6 ರಂದು ಬೆಳಗ್ಗೆ 10.30 ರಿಂದ ಎರಡು ಗಂಟೆಗಳ ಕಾಲ ವಿಕಾಸಸೌಧದ ನಾಲ್ಕನೇ ಮಹಡಿಯ ಸಭಾಂಗಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಮಾಹಿತಿಯನ್ನು ನೀಡಲು ದೆಹಲಿಯಿಂದ ಸಂಪನ್ಮೂಲ ವ್ಯಕ್ತಿಗಳು ಆಗಮಿಸುತ್ತಿದ್ದಾರೆ.

2016 ರಲ್ಲಿ 34 ದಿವಸಗಳು ಮಾತ್ರ ವಿಧಾನ ಪರಿಷತ್ ಕಲಾಪ ನಡೆದಿದ್ದರೆ, 2015 ರಲ್ಲಿ 60 ದಿನ ಸದನ ಕಲಾಪ ಜರುಗಿದೆ. ವಾರ್ಷಿಕ ಕನಿಷ್ಠ 60 ದಿನ ಸದನ ನಡಯಬೇಕು, ಈ ವರ್ಷ ಅದು ಸಾಧ್ಯವಾಗಬಹುದೆಂದರು. 10 ದಿನ ನಡೆಯಲಿರುವ ಈ ಸದನ ಕಲಾಪಕ್ಕೆ ಕರ್ನಾಟಕ ವಿಧಾನ ಪರಿಷತ್ ಸಚಿವಾಲಯದಲ್ಲಿ 905 ಲಿಖಿತ ಪ್ರಶ್ನೆಗಳನ್ನು, 75 ಚುಕ್ಕೆ ಗುರುತಿನ ಪ್ರಶ್ನೆಗಳನ್ನು, ನಿಯಮ 72 ರಡಿ 64 ಸೂಚನೆಯನ್ನು ಮತ್ತು ನಿಯಮ 330 ರಡಿ 31 ಸೂಚನೆಗಳನ್ನು ಸ್ವೀಕರಿಸಲಾಗಿದೆ ಎಂದು ಸಭಾಪತಿ ಶಂಕರಮೂರ್ತಿ ಅವರು ತಿಳಿಸಿದರು.

ಬಿ.ಬಿ.ಎಂ.ಪಿ ಚುನಾವಣೆಯಲ್ಲಿ ಮತ ಚಲಾಯಿಸಿರುವುದು ಮತ್ತು ಬಿ.ಬಿ.ಎಂ.ಪಿ, ಹಾಗೂ ವಿಧಾನ ಪರಿಷತ್ ಸಚಿವಾಲಯದ ಎರಡೂ ಕಡೆಗಳಲ್ಲಿ ಟಿ.ಎ, ಡಿ.ಎ ಕ್ಲೇಮು ಮಾಡಿರುವ ಕುರಿತು ವಿಧಾನ ಪರಿಷತ್ ಕಾರ್ಯದರ್ಶಿಗಳು 8 ಸದಸ್ಯರಿಗೆ ಜೂನ್ 3 ರೊಳಗೆ ವಿವರಣೆ ನೀಡುವಂತೆ ಬರೆದಿದ್ದ ಪತ್ರಕ್ಕೆ *ಈ* ಸದಸ್ಯರು ಪತ್ರ ಕಳುಹಿಸಿದ್ದು, ವಿವರಣೆ ನೀಡಲು ನಾಲ್ಕು ವಾರ ಸಮಯವನ್ನು ನೀಡುವಂತೆ ಕೋರಿದ್ದಾರೆ. ಇವರ ಮನವಿಯ ಬಗ್ಗೆ ಪರಿಶೀಲನೆ ನೀಡಲಾಗುತ್ತಿದೆ ಎಂದು ಅವರು ಮಾಧ್ಯಮ ಪ್ರತಿನಿಧಿಯೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸಿದರು.

ಎಸ್‌ಎಂ:ಬಿಜೆಪಿ:

# ಇಂದಿರಾನಗರದಲ್ಲಿ ಸಾರಿಗೆ ಅದಾಲತ್

ಬೆಂಗಳೂರು, ಜೂನ್ ೩, (ಕರ್ನಾಟಕ ವಾರ್ತೆ)

ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ಪೂರ್ವ) ಇಂದಿರಾ ನಗರ ಬಿ.ಡಿ.ಎ. ವಾಣಿಜ್ಯ ಸಂಕೀರ್ಣದಲ್ಲಿ ಜೂನ್ ೫ ರಂದು ಮಧ್ಯಾಹ್ನ ೩-೦೦ ಗಂಟೆಗೆ ಸಾರಿಗೆ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಇಲಾಖೆಯ ಹಿರಿಯ ಅಧಿಕಾರಿಗಳು ಸಾರಿಗೆ ಅದಾಲತ್‌ನಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಕಚೇರಿ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರು ಈ ಸಾರಿಗೆ ಅದಾಲತ್‌ನ ಪ್ರಯೋಜನವನ್ನು ಪಡೆಯಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್

# ಆಸ್ಪತ್ರೆ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ 120 ಕೋಟಿ ರೂ. ಅನುದಾನ

**ಬೆಂಗಳೂರು, ಜೂನ್ 3, (ಕರ್ನಾಟಕ ವಾರ್ತೆ)**

ರಾಜ್ಯದ 6 ಜಿಲ್ಲೆಗಳಲ್ಲಿ ಅಂತಿಮ ಹಂತದಲ್ಲಿರುವ ಕ್ಯಾನ್ಸರ್ ರೋಗಿಗಳ ಆರೈಕೆಗಾಗಿ ಉಪಶಮನ ಆರೈಕೆ ಕೇಂದ್ರ(ಪೆಲ್ಲೇಟೀವ್‌ಕೇರ್ ಸೆಂಟರ್) ಆರಂಭಿಸಲಾಗುವುದು ಎಂದು ಕಿದ್ವಾಯಿ ಆಸ್ಪತ್ರೆಯ ತಜ್ಞ ವೈದ್ಯ ಡಾ.ಕೆ.ಬಿ.ಲಿಂಗೇಗೌಡ ತಿಳಿಸಿದರು.

ಅವರಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬೆಂಗಳೂರು ಸೇರಿದಂತೆ ಮೈಸೂರು, ಹಾಸನ, ಶಿವಮೊಗ್ಗ, ರಾಯಚೂರು, ಹುಬ್ಬಳ್ಳಿ ಕ್ಯಾನ್ಸರ್ ರೋಗಿಗಳಿಗಾಗಿ ಉಪಶಮನ ಆರೈಕೆ ಕೇಂದ್ರಗಳನ್ನು ಆರಂಭಿಸಲಾಗುವುದು. ಅಂತಿಮ ಹಂತದ ಕ್ಯಾನ್ಸರ್ ರೋಗಿಗಳ ಮನೋಭಿಲಾಷೆಯಂತೆ ಕಾಲ ಕಳೆಯಲು ಈ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಅವರು ತಿಳಿಸಿದರು.

ಕ್ಯಾನ್ಸರ್ ಕಾಯಿಲೆಯನ್ನು ಆರಂಭದ ಹಂತದಲ್ಲಿಯೇ ಪತ್ತೆ ಹಚ್ಚಿದರೆ ಸುಲಭವಾಗಿ ಚಿಕಿತ್ಸೆಯ ಮೂಲಕ ಗುಣಪಡಿಸಬಹುದು. ಬಹುತೇಕ ನಮ್ಮಲ್ಲಿ ಬರುವ ರೋಗಿಗಳು ಕಾಯಿಲೆಯ 2ನೇ ಅಥವ 3ನೇ ಹಂತದಲ್ಲಿ ಬರುತ್ತಾರೆ. ಇಂತಹ ಅಂತಿಮ ಹಂತದಲ್ಲಿರುವ ಕ್ಯಾನ್ಸರ್ ಕಾಯಿಲೆ ಗುಣಪಡಿಸಲು ಸಾಧ್ಯವಾಗುವುದಿಲ್ಲ. ಕಾರಣ ಅವರ ಅವಶ್ಯಕತೆಗನುಗುಣವಾಗಿ ಈ ಆರೈಕೆ ಕೇಂದ್ರವನ್ನು ಆರಂಭಿಸಲಾಗುತ್ತಿದೆ ಎಂದರು.

ಬೆಂಗಳೂರು ಕಿದ್ವಾಯಿ ಆಸ್ಪತ್ರೆಯಲ್ಲಿ ಈಗಾಗಲೇ ಈ ಉಪಶಮನ ಆರೈಕೆ ಕೇಂದ್ರ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ತಮಗೆ ಯುರೋಪಿಯನ್ ಜರ್ನಲ್ ಆಫ್ ಪಲ್ಲೇಟೀವ್ ಕೇರ್ ಪ್ರಶಸ್ತಿ ಲಭಿಸಿದೆ ಎಂದು ಅವರು ಮಾಹಿತಿ ನೀಡಿದರು.

ಕ್ಯಾನ್ಸರ್ ರೋಗಿಗಳಿಗೆ ಕೊನೆ ಹಂತದಲ್ಲಿ ನೋವಿನ ಬಾಧೆ ಹೆಚ್ಚಾಗಿರುತ್ತದೆ. ಬಾಧೆಗನುಗುಣವಾಗಿ ಔಷಧಿಯ ಅವಶ್ಯಕತೆಯು ಸಹ ಹೆಚ್ಚಾಗುತ್ತದೆ. ಶೇ. 80ರಷ್ಟು ಕ್ಯಾನ್ಸರ್ ರೋಗಿಗಳು 3 ಅಥವ 4ನೇ

ಹಂತದಲ್ಲಿ ಚಿಕಿತ್ಸೆಗಾಗಿ ಆಗಮಿಸುತ್ತಾರೆ. ಅವರು ನೋವು ರಹಿತ ಕೊನೆ ದಿನಗಳನ್ನು ಕಳೆಯಲು ಅವಕಾಶ ಕಲ್ಪಿಸುವುದೇ ಈ ಉಪಶಮನ ಹಾರೈಕೆ ಕೇಂದ್ರಗಳ ಪ್ರಮುಖ ಉದ್ದೇಶ ಎಂದರು.

ಭಾರತದಲ್ಲೇ ಬೆಂಗಳೂರಿನ ಕಿದ್ವಾಯಿ 2ನೇ ಅತಿದೊಡ್ಡಕ್ಯಾನ್ಸರ್ ಆಸ್ಪತ್ರೆಯಾಗಿದೆ. ಕಳೆದ 27 ವರ್ಷಗಳಿಂದ ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿದೆ. ಆಸ್ಪತ್ರೆ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ 120 ಕೋಟಿ ರೂ. ಅನುದಾನ ಮಂಜೂರು ಮಾಡಿದೆ. ಕಾರ್ಪೊರೇಟ್ ಸೋಷಿಯಲ್‌ರೆಸ್ಪಾನ್ಸಿಬಲ್ ಸಂಸ್ಥೆಗಳಿಂದ 130 ಕೋಟಿ ರೂ. ಅನುದಾನ ಆಸ್ಪತ್ರೆಗೆ ಲಭ್ಯವಾಗಿದೆ. ಈ ಹಣದಲ್ಲಿ 7 ಕೋಟಿ ರೂ. ವೆಚ್ಚದ ಆಪರೇಷನ್ ಥಿಯೇಟರ್, 10 ಕೋಟಿ ವೆಚ್ಚದ ಸಲಕರಣೆಗಳು, 3 ಕೋಟಿ ವೆಚ್ಚದಲ್ಲಿ ಆಸ್ಪತ್ರೆ ನವೀಕರಣ, 6 ಕೋಟಿ ವೆಚ್ಚದ ಧರ್ಮಶಾಲೆ ನಿರ್ಮಾಣ ಮಾಡಲಾಗಿದೆ.

ಬಿಇಎಲ್ ಕಂಪೆನಿ ಕ್ಯಾನ್ಸರ್ ತಪಾಸಣೆಗಾಗಿ ಎಲ್ಲಾ ಸೌಲಭ್ಯಗಳುಳ್ಳ ಬಸ್ ನೀಡಲಿದೆ. ಬಿಬಿಎಂಪಿ ಆಸ್ಪತ್ರೆ ಆವರಣದಲ್ಲಿ 2 ಕೋಟಿ ರೂ. ವೆಚ್ಚದ ಡಾಂಬರೀಕರಣ ಪೂರೈಸಿದೆ. ಸದ್ಯದಲ್ಲೇ ಸುಸಜ್ಜಿತ ವಾಹನ ನಿಲುಗಡೆ ನಿರ್ಮಾಣ ಮಾಡಲಿದೆ ಎಂದರು. ಶೇ. 60: 40ರಷ್ಟು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನದಲ್ಲಿ ಸ್ಟೇಟ್ ಕ್ಯಾನ್ಸರ್ ಇನ್ಸಿಟ್ಯೂಟ್ ನಿರ್ಮಾಣ ಮಾಡಲಾಗುವುದು. ಆಸ್ಪತ್ರೆಗೆ ಭೇಟಿ ನೀಡುವ 18 ಸಾವಿರ ಹೊರ ರೋಗಿಗಳಲ್ಲಿ 3 ಸಾವಿರಕ್ಕೂ ಅಧಿಕ ರೋಗಿಗಳು ಹೊರ ರಾಜ್ಯದಿಂದಲೇ ಚಿಕಿತ್ಸೆಗೆ ಆಗಮಿಸುತ್ತಿದ್ದಾರೆ ಎಂದು ತಿಳಿಸಿದರು. ಸಮಾಜ ಸೇವಕರಾದ ಡಾ. ಕಿಶೋರ್‌ರಾವ್ ಉಪಸ್ಥಿತರಿದ್ದರು.

## ಜೂನ್ 5 ರಂದು "ವಿಶ್ವ ಪರಿಸರ ದಿನಾಚರಣೆ"

**ಬೆಂಗಳೂರು, ಜೂನ್ 3, (ಕರ್ನಾಟಕ ವಾರ್ತೆ)**

ಕರ್ನಾಟಕ ಸರ್ಕಾರ, ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಜಂಟಿಯಾಗಿ "ವಿಶ್ವ ಪರಿಸರ ದಿನಾಚರಣೆ" ಯನ್ನು **5ನೇ ಜೂನ್, 2017** ರಂದು ಬೆಂಗಳೂರು ಕೃಷಿ ವಿದ್ಯಾನಿಲಯ, ಗಾಂಧೀ ಕೃಷಿ ವಿಜ್ಞಾನ ಕೇಂದ್ರದ **ಡಾ|| ಬಾಬು ರಾಜೇಂದ್ರ ಪ್ರಸಾದ್ ಅಂತರಾಷ್ಟ್ರೀಯ ಸಭಾಂಗಣದಲ್ಲಿ** ಹಮ್ಮಿಕೊಳ್ಳಲಾಗಿದೆ.

ಇದೇ ಸಂದರ್ಭದಲ್ಲಿ ಕರ್ನಾಟಕ ಸರ್ಕಾರ ಪರಿಸರ ಕ್ಷೇತ್ರದಲ್ಲಿ ಗುರುತರ ಸೇವೆ ಸಲ್ಲಿಸಿರುವ ವ್ಯಕ್ತಿ/ಸಂಸ್ಥೆಗಳಿಗೆ "ಪರಿಸರ ಪ್ರಶಸ್ತಿ" ಪ್ರಧಾನ ಸಮಾಂರಭವನ್ನು ಜೂನ್ 5 ರಂದು ಬೆಳಗ್ಗೆ 9.30 ಗಂಟೆಗೆ ಕರ್ನಾಟಕ ಸರ್ಕರದ ಸನ್ಮಾನ್ಯ ಮುಖ್ಯ ಮಂತ್ರಿಗಳು ಹಾಗೂ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಮತ್ತು ಇತರೆ ಅನೇಕ ಗಣ್ಯವ್ಯಕ್ತಿಗಳ ಉಪಸ್ಥಿತಿಯಲ್ಲಿ ವ್ಯವಸ್ಥೆ ಮಾಡಲಾಗಿದ್ದು, ಈ ಪ್ರಶಸ್ತಿಯನ್ನು ಮುಖ್ಯಮಂತ್ರಿಗಳು ಪ್ರದಾನ ಮಾಡುತ್ತಾರೆಂದು ಪ್ರಕಟಣೆ ತಿಳಿಸಿದೆ.

## ಆನ್‌ಲೈನ್ ಮೂಲಕ ವಿದ್ಯಾರ್ಥಿ ವೇತನ: ದಾಖಲೆ ಒದಗಿಸಲು ಸೂಚನೆ

**ಬೆಂಗಳೂರು, ಜೂನ್ 3, (ಕರ್ನಾಟಕ ವಾರ್ತೆ)**

ಹಿಂದುಳಿದ ವರ್ಗಗಳ ಪ್ರವರ್ಗ-1 ವಿದ್ಯಾರ್ಥಿಗಳಿಗೆ ರೂ. 1.00 ಲಕ್ಷ ಹಾಗೂ ಪ್ರವರ್ಗ 2 ಎ, 3 ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ. 44,500/- ಕ್ಕಿಂತ ಕಡಿಮೆ ಆದಾಯ

**ಹೊಂದಿರುವ, 1 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ, ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನವನ್ನು 2017-18 ನೇ ಸಾಲಿನಲ್ಲಿ ಆನ್‌ಲೈನ್ ಮೂಲಕ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತದೆ.**

**ವಿದ್ಯಾರ್ಥಿಗಳ ಪೋಷಕರು ಕಡ್ಡಾಯವಾಗಿ ವಿದ್ಯಾರ್ಥಿಯ ಹೆಸರಿನಲ್ಲಿ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕುಗಳಲ್ಲಿ ಅಥವಾ ರಾಷ್ಟ್ರೀಯಕೃತ ಬ್ಯಾಂಕುಗಳಲ್ಲಿ ಬ್ಯಾಂಕ್ ಖಾತೆಯನ್ನು ತೆರೆದು, ಬ್ಯಾಂಕಿನ ಐ.ಎಫ್.ಎಸ್.ಸಿ. ಕೋಟ್ ಸಂಖ್ಯೆ ಮತ್ತು ಖಾತೆ ಸಂಖ್ಯೆ ಇರುವ ಪಾಸ್ ಪುಸ್ತಕದ ಮೊದಲ ಪುಟದ ಜೆರಾಕ್ಸ್ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ ಹಾಗೂ ವಿದ್ಯಾರ್ಥಿಯ/ಪೋಷಕರ ಜಾತಿ ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯನ್ನು ಶಾಲೆಗೆ ಪ್ರವೇಶ ಹೊಂದುವ ಸಮಯದಲ್ಲಿಯೇ ಆಯಾ ಶಾಲೆಯ ಮುಖ್ಯೋಪಾಧ್ಯಾಯರಿಗೆ ನೀಡತಕ್ಕದ್ದು. ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರುಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡಲಾಗುವ ನಮೂನೆಯಲ್ಲಿ ಸದರಿ ವಿವರಗಳನ್ನು ಭರ್ತಿ ಮಾಡಿ, ವಿದ್ಯಾರ್ಥಿಗಳಿಂದ ಪಡೆದ ಬ್ಯಾಂಕ್ ಖಾತೆ ಪುಸ್ತಕದ ಪ್ರತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಪ್ರತಿ ಮತ್ತು ಆಧಾರ್ ಪತ್ರದ ಜೆರಾಕ್ಸ್ ಪ್ರತಿಗಳ ದಾಖಲಾತಿಗಳೊಂದಿಗೆ ದಿನಾಂಕ 30-6-2017 ರೊಳಗೆ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸುವುದು.**

**ಪೋಷಕರು ಮೇಲ್ಕಂಡ ದಾಖಲಾತಿಗಳನ್ನು ಸಿದ್ದಪಡಿಸಿಟ್ಟುಕೊಂಡು, ದಾಖಲಾತಿಯ ಸಮಯದಲ್ಲಿ ಸಂಬಂಧ ಶಾಲೆಯ ಮುಖ್ಯೋಪಾಧ್ಯಾಯರೂ ಸಹ ಅರ್ಹ ವಿದ್ಯಾರ್ಥಿಗಳ ಪೋಷಕರಿಗೆ ಈ ಸಂಬಂಧ ತಿಳುವಳಿಕೆ ನೀಡಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಜೂನ್ 3, (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 04-06-2017**ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಧರ್ಮಣ್ಣ ಮತ್ತು ತಂಡ, ಹಂರನಹಳ್ಳಿ, ಅರಸೀಕೆರೆ ತಾಲ್ಲೂಕು ರವರಿಂದ ಜಾನಪದ ಹಾಗೂ ಬಾವಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. K.O. ಶಿವಣ್ಣ ಮತ್ತು ತಂಡ, ಮೊಣಕಾಲ್ಮೂರು, ಚಿತ್ರದುರ್ಗ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಗುರು ದೇವರಾಜ ರವರ ಶಿಷ್ಯರಾದ ನಿಹಾರಿಕಾ ಗೋಪಿನಾಥ** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ಮಾಚೋಹಳ್ಳಿ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಾದ ಕು:ಸುಪ್ರಿತಾ ಹಾಗೂ ಕು:ಸ್ಮಿತಾ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ದಿ ಹಿಂದೂ ಗ್ರೂಪ್ ವತಿಯಿಂದ **"ಸೈಕಲ್ ಡೇ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜುಂಬಾ, ಯೋಗಾ, ಸೈಕಲ್ ರ್‍ಯಾಲಿ, ಓದುವ ಜೋನ್ ಹಾಗೂ ಇನ್ನಿತರೇ ಮನರಂಜನೆ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

# Transport Adalat

Bangalore, June 3 (Karnataka Information)

Transport Adalat will be held on 5th June 2017 Monday at 3-00 p.m. in the premises of Deputy Commissioner for Transport and Senior Regional Transport Office, BDA Shopping Complex, Indiranagar, Bangalore -38 which will

be attended by Senior Officers of Transport Department . The public are requested to participate in the adalat.